MARCH 15, 2026

**AKASHAVANI - DHARWAD**

**PRADESH SAMACHARA (KANNADA) 12.00 P.M.**

<><><>

**ಆಕಾಶವಾಣಿ**

**ಪ್ರದೇಶ ಸಮಾಚಾರ**

<><><>

**ಸರ್ವೋಚ್ಚ ನ್ಯಾಯಾಲಯದ ಆದೇಶದಂತೆ,** ಅರಣ್ಯ ಭೂಮಿ ಮತ್ತು ಕಂದಾಯ ಭೂಮಿ ಗುರುತಿಸಿ, ವರದಿ ಸಲ್ಲಿಸಲು, ಜಿಲ್ಲಾ ಮಟ್ಟದಲ್ಲಿ, ವಿಶೇ ತನಿಖಾ ದಳ ರಚಿಸುವುದಾಗಿ, ಕಂದಾಯ ಖಾತೆ ಸಚಿವ, ಕೃ ್ಣ ಬೈರೇಗೌಡ, ತಿಳಿಸಿದ್ದಾರೆ. ದಕ್ಷಿಣಕನ್ನಡ ಜಿಲ್ಲೆ, ಮುಲ್ಕಿ ತಾಲೂಕು ಪ್ರಜಾಸೌಧ ಉದ್ಘಾಟಿಸಿ, ಅವರು ಮಾತನಾಡಿದರು. ರೈತರಿಗೆ ಹಿಂದೆ ಮಂಜೂರಾಗಿರುವ ಭೂಮಿಯಲ್ಲಿ, ಅರಣ್ಯ ಮತ್ತು ಕಂದಾಯ ಭೂಮಿ ಬೇರ್ಪಡಿಸಲು, ಜಂಟಿ ಸಮೀಕ್ಷೆ ಶೀಘ್ರ ಆರಂಭವಾಗಲಿದೆ, ಎಂದರು.

<><><>

**ಧಾರವಾಡ ನಗರದ, ಕೋರ್ಟ್ ವೃತ್ತದ ಸಮೀಪ,** ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಅವರ ಪ್ರಸ್ತಾವನೆ ಮೇರೆಗೆ, ಎನ್.ಎಂ.ಡಿ.ಸಿ– ರಾಷ್ಟ್ರೀಯ ಖನಿಜ ಅಭಿವೃದ್ಧಿ ಮಂಡಳಿ ಹಾಗೂ ಒ.ಎನ್.ಜಿ.ಸಿ–ತೈಲ ಮತ್ತು ನೈಸರ್ಗಿಕ ಅನಿಲ ಮಂಡಳಿಗಳ 50 ಕೋಟಿ ರೂಪಾಯಿ, ಸಾಮಾಜಿಕ ಹೊಣೆಗಾರಿಕೆ ನಿಧಿ ಅಡಿ ನಿರ್ಮಾಣಗೊಂಡ, ಕ್ರೀಡಾ ಸಂಕೀರ್ಣ ಹಾಗೂ ಈಜುಕೊಳವನ್ನು, ಕೇಂದ್ರ ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವ ಮನಸುಖ ಮಾಂಡವೀಯ ಉದ್ಘಾಟಿಸಿದರು. ಬಳಿಕ ಕರ್ನಾಟಕ ಮಹಾವಿದ್ಯಾಲಯದ ಮೈದಾನದಲ್ಲಿ ಆಯೋಜಿತ, ಸಂಸದ ಕ್ರೀಡಾ ಮಹೋತ್ಸವದ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಯುವಜನರು ಕ್ರೀಡಾ ಕ್ಷೇತ್ರದಲ್ಲಿನ ಸಾಧನೆ ಮೂಲಕ, ಉತ್ತಮ ಸಮಾಜ ಹಾಗೂ ರಾಷ್ಟ್ರ ನಿರ್ಮಾಣದ ಬದ್ಧತೆಯನ್ನು ತೋರಬೇಕಿದೆ ಎಂದರು.

<><><>

## ಮನಸುಖ ಮಾಂಡವೀಯ ಧ್ವನಿ 39 ಸೆಕೆಂದುಗಳು

<><><>

**ರಾಷ್ಟ್ರೀಯ ಸಾಂಖ್ಯಿಕ ಸಂಸ್ಥೆ,** ಎನ್.ಎಸ್.ಓ. ಹಾಗೂ ಕೇಂದ್ರ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವಾಲಯ, ಭಾರತೀಯ ಕಾರ್ಪೊರೇಟ್ ಸೇವಾ ವಲಯದ, ರಾಷ್ಟ್ರೀಯ ಸಮೀಕ್ಷೆ – 2026ನ್ನು ಆರಂಭಿಸುತ್ತಿದೆ. ಬೆಂಗಳೂರಿನ, ಕೋರಮಂಗಲದ, ಕೇಂದ್ರೀಯ ಸದನದಲ್ಲಿ, ನಾಳೆ ಬೆಳಗ್ಗೆ 9.30ಕ್ಕೆ, ಉದ್ಘಾಟನಾ ಕಾರ್ಯಕ್ರಮ ಆಯೋಜಿತವಾಗಿದೆ.

<><><>

**ಉತ್ತರ ಕನ್ನಡ ಜಿಲ್ಲಾ ಕಾರಾಗೃಹ ಹಾಗೂ** ತೋಟಗಾರಿಕಾ ಇಲಾಖೆ ಸಂಯುಕ್ತ ಆಶ್ರಯದಲ್ಲಿ, ಕಾರವಾರದ ಜಿಲ್ಲಾ ಕಾರಾಗೃಹ ಬಂದಿಗಳಿಗೆ ಸರ್ಕಾರದಿಂದ ದೊರೆಯುವ ಇಲಾಖಾವಾರು ಸೌಲಭ್ಯಗಳ ಕುರಿತ ತರಬೇತಿ ಕಾರ್ಯಾಗಾರ ಜರುಗಿತು. ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಬಿ. ಪರಮೇಶ್ವರ ಪ್ರಸನ್ನ ಅವರು ಕಾರ್ಯಕ್ರಮ ಉದ್ಘಾಟಿಸಿದರು.

<><><>

**ಮಾಲಿನ್ಯ ನಿಯಂತ್ರಿಸದಿರುವ** ಕಾರ್ಖಾನೆಗಳನ್ನು, ಕಾನೂನಿನಡಿ, ಶಾಶ್ವತವಾಗಿ ನಿಲ್ಲಿಸಲು ಅವಕಾಶವಿದೆ ಎಂದು, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಪಿ.ಎಂ.ನರೇಂದ್ರಸ್ವಾಮಿ, ಸ್ಪಷ್ಟ ಪಡಿಸಿದ್ದಾರೆ. ಕೊಪ್ಪಳ ತಾಲೂಕು, ಹಿರೇಬಗನಾಳ ಗ್ರಾಮಕ್ಕೆ ಭೇಟಿ ನೀಡಿ, ವಾಯು ಮಾಲಿನ್ಯ ಪರಿಶೀಲಿಸಿ, ಗ್ರಾಮದ ಕರಿಯಮ್ಮದೇವಿ ದೇವಸ್ಥಾನದ ಆವರಣದಲ್ಲಿ, ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿದರು. ಈಗಾಗಲೇ ಸಂಬಂಧಿಸಿದ ಕಾರ್ಖಾನೆಗಳಿಗೆ ನೋಟಿಸ್ ನೀಡಲಾಗಿದೆ. ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಹಿರಿಯ ಅಧಿಕಾರಿಗಳ ತಂಡ, ಸದ್ಯದಲ್ಲೇ ಸಲ್ಲಿಸುವ ವರದಿ ಆಧರಿಸಿ, ತಾವು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವುದಾಗಿ, ಭರವಸೆ ನೀಡಿದರು.

<><><>

**ಚಿಕ್ಕಮಗಳೂರು ಜಿಲ್ಲೆ,** ಭದ್ರಾ ಅಭಯಾರಣ್ಯದ ಮುತ್ತೋಡಿ ಅರಣ್ಯ ವ್ಯಾಪ್ತಿಯಲ್ಲಿ ಉಂಟಾಗಿದ್ದ ಕಾಡ್ಗಿಚ್ಚನ್ನು ಸಂಪೂರ್ಣ ಹತೋಟಿಗೆ ತರಲಾಗಿದೆ, ಬೆಂಕಿ ಅವಘಡದಲ್ಲಿ ಅಭಯಾರಣ್ಯ ಹಾಗೂ ವನ್ಯ ಜೀವಿಗಳಿಗೆ ಹೆಚ್ಚಿನ ಹಾನಿಯಾಗಿಲ್ಲ ಎಂದು ಭದ್ರಾ ವನ್ಯಜೀವಿ ವಿಭಾಗದ ಉಪ ವಲಯ ಅರಣ್ಯಾಧಿಕಾರಿ ಪುಲ್ಕಿತ್ ಮೀನಾ ತಿಳಿಸಿದ್ದಾರೆ.

<><><>

**ಚಿಕ್ಕಬಳ್ಳಾಪುರ ಜಿಲ್ಲೆ, ಹೆಚ್.ಎನ್ ವ್ಯಾಲಿ** ಮತ್ತು ಕೆ.ಸಿ ವ್ಯಾಲಿ ನೀರನ್ನು ಮೂರನೇ ಹಂತದ ಶುದ್ಧೀಕರಣ ಮಾಡಬೇಕು, ನಂತರ ಕೆರೆಗಳಿಗೆ ಹರಿಸಬೇಕು ಎಂದು ಆಗ್ರಹಿಸಿ ಇಂದು ವಿವಿಧ ಕನ್ನಡಪರ, ರೈತಪರ ಹಾಗೂ ದಲಿತಪರ ಸಂಘಟನೆಗಳು ಚಿಕ್ಕಬಳ್ಳಾಪುರ ನಗರ ಬಂದ್ ಗೆ ಕರೆ ನೀಡಿದ್ದು, ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಬಂದ್ ಹಿನ್ನೆಲೆ ನಗರದ ಹೋಟೆಲ್, ಅಂಗಡಿ ಮುಂಗಟ್ಟುಗಳನ್ನು ಸ್ವಯಂಪ್ರೇರಿತವಾಗಿ ಮುಚ್ಚಲಾಗಿತ್ತು. ಸಾರಿಗೆ ಸಂಸ್ಥೆ ಬಸ್ ಗಳ ಸಂಚಾರ ವಿರಳವಾಗಿತ್ತು. ಮುನ್ನೆಚ್ಚರಿಕೆ ಕ್ರಮವಾಗಿ ನಗರದ ವಿವಿಧೆಡೆಗಳಲ್ಲಿ, ಬಿಗಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು.

<><><>

**ರಾಜ್ಯದ ಕೆಲ ಜಿಲ್ಲೆಗಳಲ್ಲಿ ನಿನ್ನೆ ಅಕಾಲಿಕ** ಮಳೆಯಾಗಿದೆ. ಧಾರವಾಡ ನಗರದಲ್ಲಿ ಸುಮಾರು ಒಂದೂವರೆ ಗಂಟೆಗಳ ಕಾಲ ಗುಡುಗು ಸಹಿತ ಮಳೆಯಾಗಿದೆ, ಬೆಳಗಾವಿ ಜಿಲ್ಲೆ ನಿಪ್ಪಾಣಿಯಲ್ಲಿ ಆಲಿಕಲ್ಲು ಮಳೆಯಾಗಿದೆ. ದಕ್ಷಿಣ ಕನ್ನಡ ಜಿಲ್ಲೆ, ಬೆಳ್ತಂಗಡಿ ತಾಲೂಕಿನ ಹಲವೆಡೆ ಉತ್ತಮ ಮಳೆಯಾಗಿದೆ. ಮುಂದಿನ ಎರಡು ದಿನಗಳ ಕಾಲ, ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಜಿಲ್ಲೆಗಳು, ಮೂರು ದಿನಗಳ ಕಾಲ ಉತ್ತರ ಒಳನಾಡಿನ ಕೆಲ ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದೆ ಎಂದು, ಬೆಂಗಳೂರು ಭಾರತೀಯ ಹವಾಮಾನ ಕೇಂದ್ರದ ವಿಜ್ಞಾನಿ ಸಿ.ಎಸ್ ಪಾಟೀಲ್ ತಿಳಿಸಿದ್ದಾರೆ.

<><><>

**ಇಂದು ವೀರಯೋಧ, ಮೇಜರ್ ಸಂದೀಪ್** ಉಣ್ಣಿಕೃಷ್ಣನ್ ಅವರ ಜನ್ಮದಿನ. ಮುಂಬೈ ಉಗ್ರರ ದಾಳಿ ಸಂದರ್ಭ ಎದೆಗುಂದದೆ ಹೋರಾಡಿ, ಹುತಾತ್ಮರಾದ ಅಶೋಕ ಚಕ್ರ, ಮೇಜರ್ ಉಣ್ಣಿಕೃಷ್ಣನ್ ಅವರ ಧೈರ್ಯ, ಶೌರ್ಯ, ಸಾಹಸ ಹಾಗೂ ತ್ಯಾಗವು ಸದಾ ಸ್ಮರಣೀಯ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ತಮ್ಮ ಎಕ್ಸ್ ಖಾತೆ ಮೂಲಕ ಸ್ಮರಿಸಿದ್ದಾರೆ.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**

<><><>

**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ**

<><><>